**1ನೇ ಹೆಚ್ಚುವರಿ ಸಿವಿಲ್ ಜಡ್ಜ್ ಮತ್ತು ಜೆಎಂಎಫ್‌ಸಿ., ರವರ ನ್ಯಾಯಾಲಯ, ನಂಜನಗೂಡು**

**ಸಿ.ಸಿ: 1681/2018**

| | | |
|---|---|---|
| ಸಾಕ್ಷಿದಾರರ ಹೆಸರು | **ಕೆ ಮಹೇಶ** | ಪ್ರಾಸಾಃ 04 |
| ತಂದೆಯ/ಗಂಡನ ಹೆಸರು | ಲೇಃ ಕೃಷ್ಣಶೆಟ್ಟಿ | ಚಾಸಾಃ 06 |
| ವಯಸ್ಸು | 56 ವರ್ಷ | |
| ಕೆಲಸ | ಪಿ.ಎಸ್.ಐ. ನಂಜನಗೂಡು ಗ್ರಾಮಾಂತರ ಪೊಲೀಸ್ ಠಾಣೆ | ಸಾ ಪ್ರ ಬೋ |
| ವಾಸ | ನಂಜನಗೂಡು | ದಿಃ 16.07.2025 |

**ಮುಖ್ಯ ವಿಚಾರಣೆ ಪ್ರಾಜ್ಞ ಸ.ಸ.ಅ ರವರಿಂದಃ**

ನಾನು ಈ ಹಿಂದೆ ನವೆಂಬರ್ 2015 ರಿಂದ ಜುಲೈ 2019 ರ ವರೆಗೆ ಕವಲಂದೆ ಪೊಲೀಸ್ ಠಾಣೆಯಲ್ಲಿ ಮುಖ್ಯ ಪೇದೆಯಾಗಿ ಕೆಲಸ ನಿರ್ವಹಿಸಿರುತ್ತೇನೆ.

ದಿಃ 26.07.2018 ರಂದು ನಾನು ಠಾಣಾ ಕರ್ತವ್ಯದಲ್ಲಿದ್ದಾಗ ಸಂಜೆ 18.30 ಗಂಟೆ ಸಮಯದಲ್ಲಿ ಚಾಸಾ 1 ರವರು ಠಾಣೆಗೆ ಹಾಜರಾಗಿ ನೀಡಿದ ಲಿಖಿತ ದೂರನ್ನು ಹೊಂದಿಕೊಂಡು ಠಾಣಾ ಮೊಕದ್ದಮೆ ಸಂಖ್ಯೆ 110/2018 ರಂತೆ ಪ್ರಕರಣ ದಾಖಲಿಸಿ ಪ್ರ.ವ.ವ ವನ್ನು ತಯಾರಿಸಿ ಮಾನ್ಯ ಘನ ನ್ಯಾಯಾಲಂಟು ಹಾಗೂ ಮೇಲಧಿಕಾರಿಗಳಿಗೆ ನಿವೇದಿಸಿಕೊಂಡಿರುತ್ತೇನೆ.

ದಿಃ 27.07.2018 ರಂದು ಕೃತ್ಯ ಸ್ಥಳಕ್ಕೆ ಭೇಟಿ ನೀಡಿ ಚಾಸಾ 1, 4 ಮತ್ತು 5 ರವರನ್ನು ಸ್ಥಳಕ್ಕೆ ಬರ ಮಾಡಿಕೊಂಡು ಚಾಸಾ 4 ಮತ್ತು 5 ರವರಿಗೆ ಮಹಜರ್ ಗೆ ಸಹಕರಿಸುವಂತೆ ನೋಟಿಸು ಜಾರಿ ಮಾಡಿ ಚಾಸಾ 1 ರವರು ಕೃತ್ಯ ಸ್ಥಳವನ್ನು ತೋರಿಸಿಕೊಟ್ಟ ಮೇರೆಗೆ ಚಾಸಾ 4 ಮತ್ತು 5 ರವರ ಸಮಕ್ಷಮ ಕೃತ್ಯ ಸ್ಥಳದಲ್ಲಿ ಮಹಜರ್ ಕ್ರಮ ಜರುಗಿಸಿರುತ್ತೇನೆ. ಚಾಸಾ 2 ಮತ್ತು 3 ರವರ ಹೇಳಿಕೆ ಪಡೆದಿರುತ್ತೇನೆ.

ದಿಃ 07.08.2018 ರಂದು ಆರೋಪಿಗೆ ಕಲಂ 41(ಎ) ಸಿ.ಆರ್.ಪಿ.ಸಿ ಅಡಿಯಲ್ಲಿ ನೋಟಿಸನ್ನು ಜಾರಿ ಮಾಡಿರುತ್ತೇನೆ. ದಿಃ 20.08.2018 ರಂದು ಉಪ ತಹಸೀಲ್ದಾರ್ ರವರಿಗೆ ಚಾಸಾ 1 ರವರ ಬಾಬ್ತು ಜಮೀನಿಗೆ ಸಂಬಂಧಿಸಿದಂತೆ ಆರ್.ಟಿ.ಸಿ ಯನ್ನು ನೀಡುವಂತೆ ಮನವಿ ಮಾಡಿರುತ್ತೇನೆ. ನಂತರ ಈ ಪ್ರಕರಣದ ಕಡತವನ್ನು ಚಾಸಾ 7 ರವರಿಗೆ ಹಸ್ತಾಂತರಿಸಿರುತ್ತೇನೆ.

ಸಾಕ್ಷಿ ಸ್ಥಳ ಮಹಜರ್ ನಲ್ಲಿರುವ ತಮ್ಮ ಸಹಿಯನ್ನು ನೋಡಿ ಗುರುತಿಸಿದ್ದು ಅದನ್ನು ಈಗಾಗಲೇ ನಿ.ಪಿ. 2 ಎಂದು, ಸಾಕ್ಷಿಯ ಸಹಿಯನ್ನು ನಿ.ಪಿ. 2(ಬಿ) ಎಂದು ಗುರುತಿಸಲಾಯಿತು. ಸಾಕ್ಷಿ ದೂರಿನಲ್ಲಿರುವ ತಮ್ಮ ಸಹಿಯನ್ನು ನೋಡಿ ಗುರುತಿಸಿದ್ದು ಅದನ್ನು ನಿ.ಪಿ. 3 ಎಂದು, ಸಾಕ್ಷಿಯ ಸಹಿಯನ್ನು ನಿ.ಪಿ. 3(ಎ) ಎಂದು ಗುರುತಿಸಲಾಯಿತು. ಸಾಕ್ಷಿ ಪ್ರ.ವ.ವ ದಲ್ಲಿನ ತಮ್ಮ ಸಹಿಯನ್ನು ನೋಡಿ ಗುರುತಿಸಿದ್ದು ಅದನ್ನು ನಿ.ಪಿ. 4 ಎಂದು, ಸಾಕ್ಷಿಯ ಸಹಿಯನ್ನು ನಿ.ಪಿ. 4(ಎ) ಎಂದು ಗುರುತಿಸಲಾಯಿತು. ಸಾಕ್ಷಿ ಪಂಚಾಯ್ತಿದಾರರಿಗೆ ನೀಡಿದ ನೋಟಿಸಿನಲ್ಲಿ ತಮ್ಮ ಸಹಿಯನ್ನು ನೋಡಿ ಗುರುತಿಸಿದ್ದು ಅದನ್ನು ಈಗಾಗಲೇ ನಿ.ಪಿ. 5 ಎಂದು, ಸಾಕ್ಷಿಯ ಸಹಿಯನ್ನು ನಿ.ಪಿ. 5(ಎ) ಎಂದು ಗುರುತಿಸಲಾಯಿತು. ಐದು ಸಾಕ್ಷಿಕೊಡಲು ನೀಡಿರುವ ಒಪ್ಪಿಗೆ ಬಂದ ಪತ್ರದಲ್ಲಿ ತಮ್ಮ ಸಹಿಯನ್ನು ನೋಡಿ ಗುರುತಿಸಿದ್ದು ಅದನ್ನು ನಿ.ಪಿ. 6 ರಿಂದ 10 ಎಂದು, ಸಾಕ್ಷಿಯ ಸಹಿಯನ್ನು ನಿ.ಪಿ. 6(ಎ) ಯಿಂದ 10(ಎ) ಎಂದು ಗುರುತಿಸಲಾಯಿತು.

**<u>ಪಾಟೀ ಸವಾಲುಃ</u>** ಆರೋಪಿ ಪರ ವಕೀಲರಾದ ಶ್ರೀಮತಿ ಎಂ.ಎಸ್.ಪಿ ವಕೀಲರಿಂದಃ

ಚಾಸಾ 1 ರವರು ದೂರು ನೀಡುವ ಸಮಯದಲ್ಲಿ ಯಾವುದೇ ದಾಖಲೆಗಳನ್ನು ಹಾಜರುಪಡಿಸಿರುವುದಿಲ್ಲ. ದೂರು ನೀಡಿದ ದಿನದಂದೇ ನಾನು ಕೃತ್ಯ ಸ್ಥಳಕ್ಕೆ ಭೇಟಿ ನೀಡಿರುವುದಿಲ್ಲ. ನ್ಯಾಯಾಲಯದ ಮುಂದಿರುವ ಫೋಟೋಗಳನ್ನು ಚಾಸಾ 1 ರವರೇ ಹಾಜರುಪಡಿಸಿರುತ್ತಾರೆ ಎಂದರೆ ನನಗೆ ಗೊತ್ತಿಲ್ಲ. ಕೃತ್ಯ ಸ್ಥಳಕ್ಕೆ ನಾನು ಭೇಟಿ ನೀಡಿಲ್ಲ ಎಂದರೆ ಸರಿಯಲ್ಲ. ಠಾಣೆಯಲ್ಲಿಯೇ ಕುಳಿತು ಮಹಜರ್ ಕ್ರಮ ಜರುಗಿಸಿ ಸಾಕ್ಷಿದಾರರ ಸಹಿ ಪಡೆದಿದ್ದೇನೆ ಎಂದರೆ ಸರಿಯಲ್ಲ. ಚಾಸಾ 1 ರವರು ಮರು ಹೇಳಿಕೆ ನೀಡಿಲ್ಲ ಎಂದರೆ ಸರಿಯಲ್ಲ. ನಾನು ಯಾವುದೇ ಸಾಕ್ಷಿದಾರರ ಹೇಳಿಕೆ ಪಡೆದಿಲ್ಲ ಎಂದರೆ ಸರಿಯಲ್ಲ. ಆರೋಪಿಗೂ ಈ ಪ್ರಕರಣಕ್ಕೂ ಯಾವುದೇ ಸಂಬಂಧ ಇಲ್ಲದೇ ಇದ್ದರೂ ಆರೋಪಿಯ ವಿರುದ್ಧ ಸುಳ್ಳು ಪ್ರಕರಣ ದಾಖಲಿಸಲಾಗಿದೆ ಎಂದರೆ ಸರಿಯಲ್ಲ.

**<u>ಮರುವಿಚಾರಣೆಃ ಇಲ್ಲ</u>**

ನನ್ನ ಉಕ್ತಲೇಖನದ ಮೇರೆಗೆ ತೆರದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಿಸಲಾಯಿತು.

**ಓ ಹೇ ಕೇ ಸ ಇದೆ ಎಂ ಒ**

**1ನೇ ಹೆಚ್ಚುವರಿ ಸಿ.ಜೆ ಮತ್ತು ಪ್ರದನ್ಯಾದಂ**

**ನಂಜನಗೂಡು**